# ಬಾಗಲಕೋಟ ವಿಶ್ವವಿದ್ಯಾಲಯ

(ಕರ್ನಾಟಕ ಸರ್ಕಾರದ ರಾಜ್ಯ ಸಾರ್ವಜನಿಕ ವಿಶ್ವವಿದ್ಯಾಲಯ)

ಮುಧೋಳ ರಸ್ತೆ, ಜಮಖಂಡಿ-587301 ಬಾಗಲಕೋಟೆ ಜಿಲ್ಲೆ

# Bagalkot University

(A State Public University of Govt. of Karanataka)

Mudhol Road, Jamkhandi-587301 Dist: Bagalkote

Azadi Ka Amrit Mahotsav

Mail ID : bgkujkd@gmail.com

Website: https:// bgku.ac.in

**Office of the Registrar** Tel No: (08353)295123/124,


BGKUJ/RO/2024-25/ 746. Date: 15-10-2024

## ಸುತ್ತೋಲೆ

**ವಿಷಯ**: 2024-25 ನೇ ಸಾಲಿನ ಸ್ನಾತಕೋತ್ತರ ಕೋರ್ಸುಗಳಿಗೆ ಅರ್ಹತಾ ಪ್ರಮಾಣ ಪತ್ರ ಪಡೆಯುವ ಕುರಿತು.

**ಉಲ್ಲೇಖ**: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 15-10-2024

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖದನ್ವಯ, ಬಾಗಲಕೋಟ ವಿಶ್ವವಿದ್ಯಾಲಯದ ಸಂಯೋಜಿತ ಸ್ನಾತಕೋತ್ತರ ಮಹಾವಿದ್ಯಾಲಯಗಳ ಪ್ರಾಚಾರ್ಯರಿಗೆ ಈ ಮೂಲಕ ತಿಳಿಸುವುದೇನೆಂದರೆ, 2024-25ನೇ ಶೈಕ್ಷಣಿಕ ಸಾಲಿಗಾಗಿ ವಿವಿಧ ಸ್ನಾತಕೋತ್ತರ ಕೋರ್ಸಗಳಿಗೆ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ವಿಶ್ವವಿದ್ಯಾಲಯದಲ್ಲಿ ಪದವಿ ಪಡೆದ ವಿದ್ಯಾರ್ಥಿಗಳನ್ನು ಹೊರತುಪಡಿಸಿ, 'ವಿಶ್ವವಿದ್ಯಾಲಯ ಅನುದಾನ ಆಯೋಗ' (UGC) ದಿಂದ ಮಾನ್ಯತೆ ಪಡೆದ ಕರ್ನಾಟಕ ಮೂಲದ ಹಾಗೂ ಕರ್ನಾಟಕೇತರ ರಾಜ್ಯಗಳ ವಿಶ್ವವಿದ್ಯಾಲಯಗಳಿಂದ ಸ್ನಾತಕ (ಪದವಿ) ಪಡೆದ ವಿದ್ಯಾರ್ಥಿಗಳಿಗೆ ಮಾತ್ರ ಸ್ನಾತಕೋತ್ತರ ಪ್ರವೇಶ ಪಡೆಯುವಾಗ ಅರ್ಹತಾ ಪ್ರಮಾಣ ಪತ್ರ (Eligibility Certificate) ಪಡೆಯುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಲಾಗಿದೆ.

**<u>ಅರ್ಹತಾ ಪ್ರಮಾಣ ಪತ್ರ ಪಡೆಯಲು ಈ ಕೆಳಗಿನ ದಾಖಲೆಗಳು ಕಡ್ಡಾಯವಾಗಿರುತ್ತವೆ.</u>**

1. 10 ಮತ್ತು 12ನೇ ತರಗತಿಯ ಹಾಗೂ ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿ ಪಡೆದ ಎಲ್ಲ ಅಂಕಪಟ್ಟಿಗಳ ದೃಢೀಕರಿಸಿದ ಪ್ರತಿ.
2. ಗುರುತಿನ ಚೀಟಿ ಗಾತ್ರದ ಒಂದು ಭಾವಚಿತ್ರ (Identity Card Size One Photo)
3. ಅಭ್ಯರ್ಥಿಗಳು ಸಲ್ಲಿಸಿದ ಸ್ನಾತಕ/ಪದವಿ ಅಂಕಪಟ್ಟಿಗಳು ವಿಶ್ವವಿದ್ಯಾಲಯಕ್ಕೆ ಸಂಶಯಾಸ್ಪದ ಎಂದು ಕಂಡುಬಂದಲ್ಲಿ, ಅಂತಹ ಅಭ್ಯರ್ಥಿಗಳ ಅಂಕಪಟ್ಟಿಗಳನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳಿಗೆ ನೈಜತೆ ಪರಿಶೀಲನೆಗಾಗಿ ಕಳುಹಿಸಿಕೊಡಲಾಗುವುದು ಹಾಗೂ ಸದರಿ ವಿಶ್ವವಿದ್ಯಾಲಯದಿಂದ ನೈಜತೆ ಧೃಡೀಕರಣ ಬಂದಲ್ಲಿ ಮಾತ್ರ ಅರ್ಹತಾ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.

15.10.24

**ಕುಲಸಚಿವರು**

ಬಾಗಲಕೋಟ ವಿಶ್ವವಿದ್ಯಾಲಯ
(ಕರ್ನಾಟಕ ಸರ್ಕಾರದ ರಾಜ್ಯ ಸಾರ್ವಜನಿಕ ವಿಶ್ವವಿದ್ಯಾಲಯ)
ಜಮಖಂಡಿ-587301. ಜಿ. ಬಾಗಲಕೋಟ.